**ಮಾನ್ಯ ವಿಧಾನ ಪರಿಷತ್ ಸದಸ್ಯರಾದ ಶ್ರೀ ಎಸ್.ಎಲ್.ಭೋಜೇಗೌಡ ರವರು ಪ್ರಸ್ತಾಪಿಸಿರುವ ನಿಯಮ 330ರ ಅಡಿಯಲ್ಲಿ ನೀಡಿರುವ ಸೂಚನೆಗೆ ಉತ್ತರ**

**ಸೂಚನೆ:**

ಸರ್ಕಾರಿ ಮತ್ತು ಅನುದಾನಿತ ಶಾಲಾ ಹಾಗೂ ಕಾಲೇಜು ಶಿಕ್ಷಕರಿಗೆ/ಉಪನ್ಯಾಸಕರಿಗೆ ಇತರೆ (ಮಧ್ಯಾಹ್ನದ ಊಟ, ಮೊಟ್ಟೆ, ಹಾಲು ವಿತರಣೆ, ಪಠ್ಯಪುಸ್ತಕ ಹಾಗೂ ಸಮವಸ್ತ್ರ ವಿತರಣೆ, (ಎಲ್‌ಬಿಎ) ಪರೀಕ್ಷೆ, ಮೌಲ್ಯಮಾಪನ ಹಾಗೂ ದಾಖಲೀಕರಣ ಹಾಗೂ ಇನ್ನಿತರ) ಜವಬ್ದಾರಿಗಳಿಂದ ತೊಂದರೆಯಾಗುತ್ತಿರುವ ಬಗ್ಗೆ ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರ ಬಳಿ ಪ್ರಸ್ತಾಪಿಸಬಯಸುತ್ತೇನೆ.

**ಉತ್ತರ:**

ರಾಜ್ಯ ಸರ್ಕಾರದ ಮಹಾತ್ವಾಕಾಂಕ್ಷಿ ಕಾರ್ಯಕ್ರಮವಾದ ಮಧ್ಯಾಹ್ನ ಉಪಹಾರ ಯೋಜನೆಯಡಿ ರಾಜ್ಯದ ಎಲ್ಲಾ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ 1 ರಿಂದ 10ನೇ ತರಗತಿಯಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಹಾಗೂ ಸರ್ಕಾರಿ ಪೂರ್ವ ಪ್ರಾಥಮಿಕ ತರಗತಿಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅಪೌಷ್ಠಿಕತೆ ಮತ್ತು ರಕ್ತ ಹೀನತೆ ನಿವಾರಿಸಲು ವಾರದಲ್ಲಿ 6 ದಿನ ಮಧ್ಯಾಹ್ನ ಬಿಸಿಯೂಟದೊಂದಿಗೆ ಪೂರಕ ಪೌಷ್ಠಿಕ ಆಹಾರವಾದ ಮೊಟ್ಟೆ ಅಥವಾ ಬಾಳೆಹಣ್ಣು ವಿತರಿಸಲಾಗುತ್ತಿದೆ. ಈ ಕಾರ್ಯಕ್ರಮವು ಮಕ್ಕಳ ಸಮಗ್ರ ದೈಹಿಕ ಆರೋಗ್ಯದ ಬೆಳವಣಿಗೆಗೆ ಪೂರಕವಾಗಿದೆ.

ಶಾಲೆಗಳಲ್ಲಿ ಬಿಸಿಯೂಟ ಸಿದ್ಧಪಡಿಸಲು ಪೂರಕ ಪೌಷ್ಠಿಕ ಆಹಾರ ವಿತರಿಸಲು ವಿದ್ಯಾರ್ಥಿಗಳ ಸಂಖ್ಯೆಗಳಿಗೆ ಅನುಗುಣವಾಗಿ ಅಡುಗೆ ಸಿಬ್ಬಂದಿಯವರನ್ನು ನೇಮಕ ಮಾಡಿಕೊಳ್ಳಲಾಗಿದೆ. ಈ ಕಾರ್ಯಕ್ರಮದ ಮೇಲುಸ್ತುವಾರಿಯನ್ನು ಮಾತ್ರ ಶಿಕ್ಷಕರು ನೋಡಿಕೊಳ್ಳುತ್ತಾರೆ.

ಪೂರಕ ಪೌಷ್ಠಿಕ ಆಹಾರ ಖರೀದಿ ಪ್ರಕ್ರಿಯೆಯನ್ನು ಶಾಲಾ ಹಂತದಲ್ಲಿ ಶಾಲಾಭಿವೃದ್ಧಿ ಮತ್ತು ಮೇಲುಸ್ತುವಾರಿ ಸಮಿತಿಯ ಅಧ್ಯಕ್ಷರು, ಶಾಲಾ ಮುಖ್ಯ ಶಿಕ್ಷಕರು ಹಾಗೂ ಇತರರನ್ನೊಳಗೊಂಡ ಖರೀದಿ ಸಮಿತಿಯಿಂದ ನಿರ್ವಹಿಸಲಾಗುತ್ತಿದೆ.

ಸರ್ಕಾರಿ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಸಮವಸ್ತ್ರ ಮತ್ತು ಸರ್ಕಾರಿ ಹಾಗೂ ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ನೀಡಲಾಗುತ್ತಿರುವ ಪಠ್ಯಪುಸ್ತಕಗಳನ್ನು ಇಲಾಖಾ ವತಿಯಿಂದಲೇ ಖರೀದಿಸಿ ಶಾಲೆಗಳಿಗೆ ಸರಬರಾಜು ಮಾಡಲಾಗುತ್ತದೆ. ವಿದ್ಯಾರ್ಥಿಗಳಿಗೆ ಸಮವಸ್ತ್ರ ಮತ್ತು ಪಠ್ಯಪುಸ್ತಕಗಳ ವಿತರಣೆಯನ್ನು ಮಾತ್ರ ಶಾಲಾ ಹಂತದಲ್ಲಿ ಕೈಗೊಳ್ಳಲಾಗುತ್ತದೆ. ವಿದ್ಯಾರ್ಥಿಗಳಿಗೆ ಸಮವಸ್ತ್ರ ಮತ್ತು ಪಠ್ಯಪುಸ್ತಕಗಳ ವಿತರಣೆಯನ್ನು ಶಾಲಾ ಹಂತದಲ್ಲಿ ಶೈಕ್ಷಣಿಕ ವರ್ಷದಲ್ಲಿ ಒಂದು ಬಾರಿ ಮಾಡುವುದರಿಂದ ಶಿಕ್ಷಕರಿಗೆ ತೊಂದರೆಯಾಗುವುದಿಲ್ಲ.

ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವಿದ್ಯಾರ್ಥಿಗಳಿಗೆ ಸರ್ಕಾರದಿಂದ ನೀಡಲಾಗುವ ಸೌಲಭ್ಯವನ್ನು ಒದಗಿಸುವುದು ಶಿಕ್ಷಕರ ಆದ್ಯ ಕರ್ತವ್ಯವಾಗಿರುತ್ತದೆ. ಶಿಕ್ಷಕರನ್ನು ಈ ಜವಾಬ್ದಾರಿಯಿಂದ ಮುಕ್ತಗೊಳಿಸಿದರೆ ವಿದ್ಯಾರ್ಥಿಗಳಿಗೆ ಸಕಾಲದಲ್ಲಿ ಸೌಲಭ್ಯಗಳು ದೊರೆಯದೇ ವಿದ್ಯಾರ್ಥಿಗಳು ಸೌಲಭ್ಯಗಳಿಂದ ವಂಚಿತರಾಗಿ ವಿದ್ಯಾರ್ಥಿಗಳ ಸರ್ವತೋಮುಖ ಬೆಳವಣಿಗೆಗೆ ತೊಂದರೆಯಾಗುತ್ತದೆ.

ಆದಕಾರಣ ಮಧ್ಯಾಹ್ನದ ಬಿಸಿಯೂಟ, ಪೂರಕ ಪೌಷ್ಠಿಕ ಆಹಾರ, ಸಮವಸ್ತ್ರ ಮತ್ತು ಪಠ್ಯಪುಸ್ತಕಗಳ ವಿತರಣೆಯ ಕಾರ್ಯಕ್ರಮಗಳನ್ನು ಶಿಕ್ಷಕರ ಮೇಲುಸ್ತುವಾರಿಯಲ್ಲಿ ಮುಂದುವರೆಸುವುದು ಸೂಕ್ತವಾಗಿದೆ.

ಮೌಲ್ಯಾಂಕನ ಮತ್ತು ಮೌಲ್ಯಮಾಪನಗಳು ಶಾಲಾ ವಿದ್ಯಾರ್ಥಿಗಳ ಗುಣಮಟ್ಟದ ಕಲಿಕೆಯನ್ನು ಖಾತ್ರಿಪಡಿಸುತ್ತವೆ. ಆರ್.ಟಿ.ಇ. 2009, ಸೆಕ್ಷನ್ -29 (ಎಚ್) ರನ್ವಯ ನಿರಂತರ ಹಾಗೂ ವ್ಯಾಪಕ ಮೌಲ್ಯಮಾಪನ (Continues and Comprehensive Evaluation - CCE) ಸಾಧನವನ್ನು ಕರ್ನಾಟಕ ರಾಜ್ಯದಲ್ಲಿ ಅಳವಡಸಿಕೊಳ್ಳಲಾಗಿದೆ. ಈ ಸಾಧನವು ವಿದ್ಯಾರ್ಥಿಯ ಸರ್ವತೋಮುಖ ಕಲಿಕೆಯ ಪ್ರಗತಿಯನ್ನು ಖಾತ್ರಿಪಡಿಸಿಕೊಂಡು ದಾಖಲೀಕರಣಕ್ಕೆ ಸಹಾಯ ಮಾಡುತ್ತದೆ.

ಸದರಿ CCE ಮುಂದುವರಿಕೆಯ ಭಾಗವಾಗಿ ರಾಜ್ಯದಲ್ಲಿ ಪಾಠ ಆಧಾರಿತ ಮೌಲ್ಯಾಂಕನವನ್ನು (LBA-Lesson Based Assement) ಅಳವಡಿಸಿ ಮೌಲ್ಯಮಾಪನವನ್ನು ಕೈಗೊಳ್ಳಲಾಗುತ್ತಿದೆ. ಸದರಿ ಪಾಠ ಆಧಾರಿತ ಮೌಲ್ಯಾಂಕದ ಉದ್ದೇಶಗಳು ಕೆಳಕಂಡಂತಿದೆ.

**ಉದ್ದೇಶಗಳು**

- ವಿದ್ಯಾರ್ಥಿಗಳ ಕಲಿಕೆಯನ್ನು ಸುಧಾರಿಸಿ ಪ್ರತಿ ಪಾಠದ ನಂತರ ವಿದ್ಯಾರ್ಥಿಯ ಕಲಿಕೆಯನ್ನು ದೃಢೀಕರಿಸಿಕೊಳ್ಳುವುದು.
- ವಿದ್ಯಾರ್ಥಿಗಳಲ್ಲಿ ಪರೀಕ್ಷೆಗಳನ್ನು ಎದುರಿಸುವ ಸಾಮರ್ಥ್ಯವನ್ನು ವೃದ್ಧಿಸಿ, ಪರೀಕ್ಷಾ ಒತ್ತಡವನ್ನು ಕಡಿಮೆ ಮಾಡುವುದು.
- ನಿರಂತರ ವಿಶ್ಲೇಷಣೆಯಿಂದ ನಿಗದಿತ ಕಲಿಕಾ ಫಲಗಳ ಗಳಿಕೆಯಾಗುವುದನ್ನು ಖಾತ್ರಿಪಡಿಸಿಕೊಳ್ಳುವುದು.
- ಶಿಕ್ಷಕರ ಮೌಲ್ಯಮಾಪನ ಸಾಮರ್ಥ್ಯವನ್ನು ಹೆಚ್ಚಿಸುವುದು.
- ವಿದ್ಯಾರ್ಥಿಗಳ ಕಲಿಕೆಯನ್ನು ನಿರಂತರವಾಗಿ ಅವಲೋಕಿಸಿ, ಪರಿಹಾರ ಕ್ರಮಗಳನ್ನು ಕೈಗೊಳ್ಳುವುದು.
- ಪ್ರತಿ ಹಂತದ ವಿದ್ಯಾರ್ಥಿಯ ಕಲಿಕೆಯನ್ನು ಪೋಷಕರ ಗಮನಕ್ಕೆ ತರುವುದು.

ಮೇಲ್ಕಂಡ ಉದ್ದೇಶಗಳಿಂದ ಎಲ್.ಬಿ.ಎ ಅಡಿ ಮೌಲ್ಯಮಾಪನವನ್ನು ಪ್ರತಿ ಪಾಠಕ್ಕೂ ಹಮ್ಮಿಕೊಂಡು, ಆನ್‌ಲೈನ್‌ನಲ್ಲಿ ಎಸ್.ಎ.ಟಿ.ಎಸ್ ತಂತ್ರಾಂಶದಲ್ಲಿ ಅಳವಡಿಸಲಾಗುತ್ತಿದೆ. ಈ ರೀತಿ ತಂತ್ರಾಂಶದಲ್ಲಿ ಆನ್‌ಲೈನ್‌ನಲ್ಲಿ ದಾಖಲೀಕರಿಸುವುದರಿಂದ ಆಗುವ ಅನುಕೂಲಗಳು ಈ ಕೆಳಕಂಡಂತೆ ಇರುತ್ತವೆ.

**ಅನುಕೂಲಗಳು**

- ಎಲ್.ಬಿ.ಎ ಅಡಿ ಪ್ರತಿ ವಿಷಯಕ್ಕೆ ಪ್ರಶ್ನೆಕೋಠಿಯನ್ನು ಸಿದ್ಧಪಡಿಸಿ, ವೆಬ್ ಸೈಟ್ ಅಲ್ಲಿ ಅಳವಡಿಸಿ, ಶಿಕ್ಷಕರಿಗೆ ಲಭ್ಯಗೊಳಿಸಲಾಗಿದೆ. ಇದರಿಂದ ಪ್ರತಿ ಮೌಲ್ಯಮಾಪನ ಸಂದರ್ಭದಲ್ಲಿ ಪ್ರಶ್ನೆ ಪತ್ರಿಕೆಯನ್ನು ರೂಪಿಸುವ ಸಮಯವನ್ನು ಉಳಿತಾಯಗೊಳಿಸಿ, ಅವರ ಹೊರೆಯನ್ನು ಕಡಿಮೆಮಾಡಿದೆ.
- ಪ್ರತಿ ಪಾಠಕ್ಕೂ ಶಿಕ್ಷಕರು ಬೌತಿಕವಾಗಿ ದಾಖಲೆಗಳನ್ನು ಇಡದೇ, ದಾಖಲೆಗಳನ್ನು ಹುಡುಕದೇ ಆನ್ಲೈನ್ ಅಲ್ಲಿ ವಿವರ ನಮೂದಿಸುವುದರಿಂದ ಶಿಕ್ಷಕರ ಹೊರೆ ಸಾಕಷ್ಟು ಕಡಿಮೆಯಾಗುತ್ತದೆ.

- ವಿದ್ಯಾರ್ಥಿಗಳ ಪ್ರಗತಿ ದಾಖಲೆಯು ಶಾಲೆ, ತಾಲ್ಲೂಕು, ಜಿಲ್ಲೆ ಮತ್ತು ರಾಜ್ಯ ಹಂತದಲ್ಲಿ ಲಭ್ಯವಾಗುವುದರಿಂದ ಕಲಿಕಾ ಫಲಗಳ ಗಳಿಕೆ, ಪ್ರಗತಿ ಮಾಪನ, ಹಿಂದುಳಿದ ಕಲಿಕಾಂಶಗಳಿಗೆ ಪರಿಹಾರ ಕ್ರಮಗಳನ್ನು ಕೈಗೊಳ್ಳುವುದು ಸುಲಭವಾಗುತ್ತದೆ.
- ಕಲಿಕೆಯ ಕ್ಲಿಷ್ಟಕರ ಅಂಶಗಳನ್ನು ವಿವಿಧ ಹಂತಗಳಲ್ಲಿ ಗುರುತಿಸುವುದರಿಂದ ಶಿಕ್ಷಕರಿಗೆ ಹಿಮ್ಮಾಹಿತಿ ನೀಡುವುದು ಸುಲಭವಾಗಿ, ಪರಿಹಾರ ಕ್ರಮಗಳನ್ನು ಕೈಗೊಳ್ಳಲು ಸಹಕಾರಿಯಾಗಿದೆ.
- ಕಲಿಕೆ – ಮೌಲ್ಯಮಾಪನ - ಪರಿಹಾರ ಬೋಧನೆಗಳು ಶಿಕ್ಷಕರ ಕರ್ತವ್ಯದ ಮೂಲಭೂತ ಅಂಶಗಳಾಗಿದ್ದು, ಇವುಗಳನ್ನು ತಂತ್ರಾಂಶದಲ್ಲಿ ನಮೂದಿಸುವುದು ಶಿಕ್ಷಕರ ದಾಖಲೀಕರಣದ ಹೊರೆಯನ್ನು ಕಡಿಮೆಗೊಳಿಸುವ ಗಮನಾರ್ಹ ಹೆಜ್ಜೆಯಾಗಿರುವುದಲ್ಲದೇ, ತಕ್ಷಣದ ಪರಿಹಾರ ಕ್ರಮಕೈಗೊಳ್ಳಲು ಉತ್ತಮ ಸಾಧನವಾಗುತ್ತದೆ.

**ಪದವಿ ಪೂರ್ವ ಶಿಕ್ಷಣಕ್ಕೆ ಸಂಬಂಧಿಸಿದಂತೆ:**

ಎಲ್.ಬಿ.ಎ (LESSON BASED ASSESSEMENT) 2026-27ನೇ ಶೈಕ್ಷಣಿಕ ಸಾಲಿನಿಂದ ಸರ್ಕಾರಿ/ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಈಗಾಗಲೇ ಜಾರಿಯಲ್ಲಿರುವ ಕಿರುಪರೀಕ್ಷೆಗಳು, ಅರ್ಧವಾರ್ಷಿಕ ಪರೀಕ್ಷೆಗಳು ಮತ್ತು ಎರಡು ಪೂರ್ವ ಸಿದ್ಧತಾ ಪರೀಕ್ಷೆಗಳ ಜೊತೆಗೆ LBA (LESSON BASED ASSESSEMENT) ಘಟಕ ಆಧಾರಿತ ಮೌಲ್ಯಮಾಪನವನ್ನು ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳ ಫಲಿತಾಂಶ ಸುಧಾರಿಸಲು ಹಾಗೂ ಪ್ರತಿ ಘಟಕದ ನಂತರ ವಿದ್ಯಾರ್ಥಿಯ ಕಲಿಕೆಯನ್ನು ದೃಢೀಕರಿಸಲು ಘಟಕ ಆಧಾರಿತ ಮೌಲ್ಯಮಾಪನ ಪ್ರಶ್ನೆ ಕೋಠಿಯನ್ನು ಸಿದ್ಧಪಡಿಸಿ ಇಲಾಖೆಯ ಜಾಲತಾಣದಲ್ಲಿ ಅಳವಡಿಸಲಾಗಿದೆ. ಇದರಿಂದ ವಿದ್ಯಾರ್ಥಿಗಳ ಕಲಿಕೆಯನ್ನು ಸುಧಾರಿಸಲು ಹಾಗೂ ಪ್ರತಿ ಘಟಕದ ನಂತರ ವಿದ್ಯಾರ್ಥಿಯ ಕಲಿಕೆಯನ್ನು ದೃಢೀಕರಿಸಿಕೊಳ್ಳಲು ಸಾಧ್ಯವಾಗುತ್ತದೆ.

ವಿದ್ಯಾರ್ಥಿಗಳ ಪರೀಕ್ಷಾ ಒತ್ತಡವನ್ನು ಕಡಿಮ ಮಾಡುವುದು, ಕಲಿಕಾ ಸಾಮರ್ಥ್ಯವನ್ನು ಹೆಚ್ಚಿಸುವುದು, ನಿರಂತರ ಅಂಕಗಳ ವಿಶ್ಲೇಷಣೆಯಿಂದ ಫಲಿತಾಂಶವನ್ನು ಉತ್ತಮ ಪಡಿಸುವುದು, ಉಪನ್ಯಾಸಕರ ಮೌಲ್ಯಮಾಪನ ಸಾಮರ್ಥ್ಯವನ್ನು ಹೆಚ್ಚಿಸುವುದು, ದುರ್ಬಲ ವಿದ್ಯಾರ್ಥಿಗಳಿಗೆ ಪರಿಹಾರಾತ್ಮಕ (REMEDIAL) ಬೋಧನೆ ಒದಗಿಸುವ ಮೂಲಕ ವಿದ್ಯಾರ್ಥಿಗಳ ಕಲಿಕಾ ಫಲಿತಾಂಶವನ್ನು ಹೆಚ್ಚಿಸುವ ಉದ್ದೇಶದಿಂದ ಅನುಷ್ಠಾನಗೊಳಿಸಲಾಗಿದೆ.

ಈಗಾಗಲೇ ಪ್ರೌಢ ಶಾಲಾ ವಿಭಾಗದಲ್ಲಿ "ಘಟಕ ಆಧಾರಿತ ಮೌಲ್ಯಮಾಪನ" (LESSON BASED ASSESSEMENT) ಅನುಷ್ಠಾನಗೊಳಿಸಲಾಗುತ್ತಿದೆ. ಅದೇ ಮಾದರಿಯಲ್ಲಿ ಸರ್ಕಾರಿ / ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ಪ್ರಥಮ ಮತ್ತು ದ್ವಿತೀಯ ಪಿಯುಸಿ ವಿದ್ಯಾರ್ಥಿಗಳಿಗೆ ನಡೆಸಲಾಗುತ್ತಿದೆ ಇದರಿಂದ ಉಪನ್ಯಾಸಕರ ದೈನಂದಿನ ಕೆಲಸಗಳಿಗೆ ಯಾವುದೇ ರೀತಿಯ ತೊಂದರೆಯಾಗುವುದಿಲ್ಲ.

2026-27ನೇ ಶೈಕ್ಷಣಿಕ ಸಾಲಿನಿಂದ ಇದೇ ಪ್ರಥಮ ಬಾರಿಗೆ ಇಲಾಖೆಯಿಂದ ಉಚಿತ ಪಠ್ಯಪುಸ್ತಕಗಳನ್ನು ಸರ್ಕಾರಿ ಪದವಿಪೂರ್ವ ಕಾಲೇಜುಗಳ ವಿದ್ಯಾರ್ಥಿಗಳಿಗೆ ವಿತರಿಸಲಾಗುತ್ತಿದೆ. ರಾಜ್ಯದ 189 ತಾಲೂಕು ಕೇಂದ್ರಗಳಲ್ಲಿ ನೋಡಲ್ ಕೇಂದ್ರಗಳನ್ನು ಸ್ಥಾಪಿಸಿ ಸ್ಥಳೀಯ ಪ್ರಾಂಶುಪಾಲರನ್ನು ನೋಡಲ್ ಅಧಿಕಾರಿಗಳಾಗಿ ಗುರುತಿಸಿ ನಿಯೋಜಿಸಿದ್ದು, ಮುದ್ರಕರಿಂದ ಸರಬರಾಜಾಗುವ ಪಠ್ಯಪುಸ್ತಕಗಳನ್ನು ಸ್ವೀಕರಿಸಿ ಅವುಗಳನ್ನು ನೇರವಾಗಿ ಸಂಬಂಧಿಸಿದ ಕಾಲೇಜುಗಳಿಗೆ ವಿತರಿಸಲು ಕ್ರಮ

ತೆಗೆದುಕೊಳ್ಳಲಾಗಿದೆ. ಯಾವುದೇ ಉಪನ್ಯಾಸಕರು ಈ ಕಾರ್ಯದಲ್ಲಿ ಭಾಗವಹಿಸುವಂತೆ ಇಲಾಖೆಯು ನಿರ್ದೇಶಿಸಿರುವುದಿಲ್ಲ.

**ವಿದ್ಯಾರ್ಥಿ ದತ್ತಾಂಶ ನಿರ್ವಹಣಾ ಸಹಾಯಕರ ನೇಮಕ:-**

ಶಿಕ್ಷಕರು ಬೋಧನೆ ಹಾಗೂ ವಿದ್ಯಾರ್ಥಿಗಳ ಕಲಿಕಾ ಪ್ರಗತಿಗೆ ಹೆಚ್ಚಿನ ಗಮನ ಹರಿಸಲು ಅನುಕೂಲವಾಗುವಂತೆ ವಿದ್ಯಾರ್ಥಿ ದತ್ತಾಂಶ ನಿರ್ವಹಿಸಲು ಶಾಲಾ ಸಹಾಯಕರ ಅಗತ್ಯತೆ ಇರುತ್ತದೆ. ವಿದ್ಯಾರ್ಥಿಗಳ ದಾಖಲಾತಿ ಸಂದರ್ಭದಲ್ಲಿ ಒಂದು ಬಾರಿಗೆ ಮಾತ್ರ ವಿದ್ಯಾರ್ಥಿಗಳ ದತ್ತಾಂಶ ಇಂದೀಕರಿಸಬೇಕಾಗಿದ್ದು, ತದನಂತರದಲ್ಲಿ ರೂಪಣಾತ್ಮಕ ಮತ್ತು ಸಂಕಲನಾತ್ಮಕ ಮೌಲ್ಯಮಾಪನಗಳು ನಡೆಸಿದ ಸಂದರ್ಭದಲ್ಲಿ ಮಾತ್ರ ವಿದ್ಯಾರ್ಥಿಗಳ ಗ್ರೇಡ್‌ಗಳನ್ನು ದಾಖಲಿಸಬೇಕಾಗಿರುತ್ತದೆ. ಇದರಿಂದ ಶಾಲಾ ಶಿಕ್ಷಕಿಗೆ ಯಾವುದೇ ಹೆಚ್ಚಿನ ಹೊರೆ ಆಗುವುದಿಲ್ಲ.

2026-27ನೇ ಸಾಲಿಗೆ ಸಮಗ್ರ ಶಿಕ್ಷಣ ಕರ್ನಾಟಕ ಯೋಜನೆಯಡಿ ಅತೀ ಹೆಚ್ಚು ದಾಖಲಾತಿ ಹೊಂದಿರುವ 956 ಸಂಖ್ಯೆಯ ಮಹತ್ವಾಕಾಂಕ್ಷಿ ಶಾಲೆಗಳಲ್ಲಿ ಮತ್ತು ಪಿ.ಎಂ.ಶ್ರೀ ಯೋಜನೆಯಡಿ 164 ಪಿ.ಎಂ.ಶ್ರೀ ಶಾಲೆಗಳಲ್ಲಿ ವಿದ್ಯಾರ್ಥಿ ದತ್ತಾಂಶ ನಿರ್ವಹಣಾ ಸಹಾಯಕರನ್ನು ತಿಂಗಳಿಗೆ ರೂ.10,000/- ರಂತೆ 10 ತಿಂಗಳ ಅವಧಿಗೆ ಗೌರವಧನವನ್ನು ನಿಗದಿಪಡಿಸಿ ಎಸ್.ಡಿ.ಎಂ.ಸಿ. ಹಂತದಲ್ಲಿ ವಿದ್ಯಾರ್ಥಿ ಹೊರಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

2026-27ನೇ ಸಾಲಿನ ಶಾಲಾ ವಾರ್ಷಿಕ ನಿರ್ವಹಣಾ ಅನುದಾನದಲ್ಲಿ ಅನುದಾನದ ಲಭ್ಯತೆಯನ್ನಾಧರಿಸಿ ವಿದ್ಯಾರ್ಥಿಗಳ ಸಂಖ್ಯೆ ಹೆಚ್ಚಿರುವ ಸರ್ಕಾರಿ ಶಾಲೆಗಳಲ್ಲಿ ಎಸ್.ಡಿ.ಎಂ.ಸಿ. ಹಂತದಲ್ಲಿ ಅರೆಕಾಲಿಕ ವಿದ್ಯಾರ್ಥಿ ದತ್ತಾಂಶ ನಿರ್ವಹಣಾ ಸಹಾಯಕರನ್ನು ಹೊರಗುತ್ತಿಗೆ ಆಧಾರದಲ್ಲಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ.

**ಇಪಿ 232 ಯೋಸಕ 2026**

(ಎಸ್.ಮಧುಬಂಗಾರಪ್ಪ)
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು**